## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 599 |
| ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 10.03.2020 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಸಚಿವರು |

| ಕ್ರ ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಮರಳಿಗೆ ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರವು ದಿನಾಂಕ 12.08.2016 ರಂದು ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳು, 1994ಕ್ಕೆ ತಿದ್ದುಪಡಿ ತಂದು ತಿದ್ದುಪಡಿ ನಿಯಮಗಳು, 2016ನ್ನು ಜಾರಿಗೊಳಿಸಿರುತ್ತದೆ. ಸದರಿ ತಿದ್ದುಪಡಿ ನಿಯಮಾವಳಿಗಳಲ್ಲಿ ನದಿ ಪಾತ್ರದ ಮರಳು ಬ್ಲಾಕ್‌ಗಳನ್ನು ಸಾರ್ವಜನಿಕ ಟೆಂಡರ್ ಕಂ-ಹರಾಜು ಮೂಲಕ ವಿಲೇಪಡಿಸಲು, ಸರ್ಕಾರಿ ಕಾಮಗಾರಿಗಳಿಗೆ ಮೀಸಲಿರಿಸಲು, ಪಟ್ಟಾ ಜಮೀನು ಮರಳು ಗಣಿಗಾರಿಕೆಗೆ ಲೈಸನ್ಸ್ ನೀಡಲು, ಎಂ-ಸ್ಯಾಂಡ್ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಅದರಂತೆ ರಾಜ್ಯದ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಮರಳನ್ನು ಪೂರೈಕೆ ಮಾಡಲಾಗುತ್ತಿದೆ. ಅದ್ಯಾಗೂ ಸಹ ಕೆಲವು ಜಿಲ್ಲೆಗಳಲ್ಲಿ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಅಲ್ಪ ಪ್ರಮಾಣದ ಮರಳಿನ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ. | ಈ ಅಭಾವವನ್ನು ನೀಗಿಸಲು ಮರಳು ನೀತಿಯನ್ನು ಜಾರಿಗೆ ತರಲಾಗಿದೆಯೇ; | ರಾಜ್ಯದಲ್ಲಿ ಮರಳಿನ ಅಭಾವವನ್ನು ನೀಗಿಸಲು ಹಾಗೂ ಯೋಗ್ಯ ದರದಲ್ಲಿ ಮರಳು ದೊರಕುವಂತೆ ಮಾಡಲು ಪ್ರಸ್ತುತ ಇರುವ ನಿಯಮಗಳಂತೆಯೇ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಮರಳು ಪೂರೈಕೆ ಮಾಡಲು ಕ್ರಮ ವಹಿಸಲಾಗುತ್ತಿದ್ದು, ವಿವರಗಳು ಈ ಕೆಳಕಂಡಂತಿರುತ್ತವೆ.<br>• ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2016 ರ ನಿಯಮ 31-T ರಂತೆ, ರಾಜ್ಯದ ನದಿ ಪಾತ್ರಗಳಲ್ಲಿ 237 ಮರಳು ಬ್ಲಾಕ್‌ಗಳನ್ನು ಸಾರ್ವಜನಿಕ ಟೆಂಡರ್ ಕಂ ಹರಾಜು ಮೂಲಕ ಮರಳು ಗುತ್ತಿಗೆಗಳನ್ನು ಮಂಜೂರು ಮಾಡಲಾಗಿರುತ್ತದೆ. 2019-20ನೇ ಸಾಲಿನ ಜನವರಿ ಅಂತ್ಯದ ವರೆಗೆ ಸದರಿ ಮರಳು ಬ್ಲಾಕ್‌ಗಳಿಂದ 16.82 ಲಕ್ಷ ಮೆಟ್ರಿಕ್ ಟನ್ ಮರಳನ್ನು ಸಾರ್ವಜನಿಕ ಕಾಮಗಾರಿಗಳಿಗೆ ಪೂರೈಸಲಾಗುತ್ತಿದೆ. |

- ನಿಯಮ 31-S ರಂತೆ, ಸರ್ಕಾರಿ ಕಾಮಗಾರಿಗಳಿಗೆ ರಾಜ್ಯದ ನದಿ ಪಾತ್ರಗಳಲ್ಲಿ **18 ಮರಳು** ಬ್ಲಾಕ್‌ಗಳನ್ನು ಸರ್ಕಾರಿ ಇಲಾಖೆ / ಸಂಸ್ಥೆಗಳಿಗೆ ಮಂಜೂರು ಮಾಡಲಾಗಿರುತ್ತದೆ. ಈ ಮರಳು ಬ್ಲಾಕ್‌ಗಳಲ್ಲಿ 2019-20ನೇ ಸಾಲಿನ ಜನವರಿ ಅಂತ್ಯದವರೆಗೆ 1.34 ಲಕ್ಷ ಮೆಟ್ರಿಕ್ ಟನ್ ಮರಳು ಗಣಿಗಾರಿಕೆ ನಡೆಸಿ, ಸರ್ಕಾರಿ ಕಾಮಗಾರಿಗಳಿಗೆ ಪೂರೈಸಲಾಗಿರುತ್ತದೆ.
- ನಿಯಮ 31-ZA ರಂತೆ, ಪಟ್ಟಾ ಜಮೀನುಗಳಲ್ಲಿ ಮರಳು ಗಣಿಗಾರಿಕೆಗಾಗಿ **44 ಲೈಸನ್ಸ್** ಮಂಜೂರು ಮಾಡಲಾಗಿರುತ್ತದೆ. 2017-18ನೇ ಸಾಲಿನ ಜನವರಿ ಅಂತ್ಯದವರೆಗೆ 2.95 ಲಕ್ಷ ಮೆಟ್ರಿಕ್ ಟನ್ ಮರಳು ಗಣಿಗಾರಿಕೆ ನಡೆಸಿ, ಸಾರ್ವಜನಿಕರಿಗೆ ವಿತರಿಸಲಾಗಿರುತ್ತದೆ.
- ನಿಯಮ **31-ZB ರಂತೆ,** ಕರಾವಳಿ ನಿಯಂತ್ರಣ ವಲಯಗಳಲ್ಲಿ 30 ಮರಳು ದಿಬ್ಬಗಳಲ್ಲಿ ಮರಳು ತೆರವುಗೊಳಿಸಲು ಕರ್ನಾಟಕ ಕರಾವಳಿ ವಲಯ ನಿಯಂತ್ರಣ ಪ್ರಾಧಿಕಾರದಿಂದ ಅನುಮತಿ ಪಡೆಯಲಾಗಿರುತ್ತದೆ. ಅದರಂತೆ, ಸದರಿ ಮರಳು ದಿಬ್ಬಗಳಿಂದ 2019-20ನೇ ಸಾಲಿನ ಜನವರಿ ಅಂತ್ಯದವರೆಗೆ 7.08 ಲಕ್ಷ ಮೆಟ್ರಿಕ್ ಟನ್ ಮರಳನ್ನು ತೆರವುಗೊಳಿಸಿ, ಸಾರ್ವಜನಿಕರಿಗೆ ವಿತರಿಸಲಾಗಿರುತ್ತದೆ.
- ನಿಯಮ **31-ZC ರಂತೆ,** ಪ್ರಸ್ತುತ ರಾಜ್ಯದಲ್ಲಿ ಒಟ್ಟು 289 ಎಂ-ಸ್ಯಾಂಡ್ ಘಟಕಗಳು ಕಾರ್ಯ ನಿರ್ವಹಿಸುತ್ತಿರುತ್ತವೆ. ಸದರಿ ಎಂ-ಸ್ಯಾಂಡ್ ಘಟಕಗಳಿಂದ ವಾರ್ಷಿಕ ಅಂದಾಜು 30 ದಶಲಕ್ಷ ಮೆಟ್ರಿಕ್ ಟನ್ ಎಂ-ಸ್ಯಾಂಡನ್ನು ಉತ್ಪಾದಿಸಲಾಗುತ್ತಿದ್ದು, ಸರ್ಕಾರಿ ಮತ್ತು ಸಾರ್ವಜನಿಕ ಕಾಮಗಾರಿಗಳಿಗೆ ಪೂರೈಕೆಯಾಗುತ್ತಿದೆ.
- ಮುಂದುವರೆದು, ದಿನಾಂಕ **16.11.2017** ರಂದು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ಕ್ಕೆ ತಿದ್ದುಪಡಿ ಮಾಡಿ, ನಿಯಮ **31-ZF & 31-ZG** ರಲ್ಲಿ ವಿದೇಶಗಳಿಂದ ರಾಜ್ಯಕ್ಕೆ ಮರಳು ಪೂರೈಕೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಆದುದರಿಂದ, **49,213** ಮೆಟ್ರಿಕ್ ಟನ್ ವಿದೇಶದಿಂದ ಆಮದಾದ ಮರಳನ್ನು ಸಾರ್ವಜನಿಕ ಕಾಮಗಾರಿಗಳಿಗೆ ಪೂರೈಸಲಾಗುತ್ತಿದೆ.
- ದಿನಾಂಕ: 01.10.2019 ರ ಸರ್ಕಾರದ ಆದೇಶ ಸಂಖ್ಯೆ: ಸಿಐ 213 ಎಂಎಂಎನ್ **2019** ರಂತೆ ಪ್ರವಾಹದಿಂದ ನದಿಗಳ ಪಕ್ಕದ ಕೃಷಿ ಜಮೀನುಗಳಲ್ಲಿ ಸಂಗ್ರಹವಾಗಿರುವ 1,54,616 ಮೆಟ್ರಿಕ್ ಟನ್ ಮರಳನ್ನು ಸ್ಥಳೀಯ ಕಾಮಗಾರಿಗಳಿಗೆ ನೀಡಲಾಗಿರುತ್ತದೆ.
- ಆದಾಗ್ಯೂ ಸಹ ಮರಳಿನ ಬೇಡಿಕೆ ಹಾಗೂ ಸರಬರಾಜಿನಲ್ಲಿ ಅಲ್ಪಪ್ರಮಾಣದ ವ್ಯತ್ಯಾಸವಿರುವ ಕಾರಣ ಈ ವ್ಯತ್ಯಾಸದ ಮರಳಿನ ಪ್ರಮಾಣವನ್ನು ಸರಿದೂಗಿಸಲು ರಾಜ್ಯದಲ್ಲಿ ಮರಳು ನೀತಿ ಜಾರಿಗೆ ತರುವ ಕುರಿತು ರೂಪುರೇಷೆಗಳನ್ನು ಸಿದ್ಧಪಡಿಸಲಾಗುತ್ತಿದ್ದು, ಸರ್ಕಾರದಿಂದ ಶೀಘ್ರದಲ್ಲಿ ಹೊಸ ಮರಳು ನೀತಿಯನ್ನು ಜಾರಿಗೆ ತರಲು ಕ್ರಮವಹಿಸಲಾಗುತ್ತಿದೆ.

| | | |
|---|---|---|
| ಇ. | ಸದರಿ ನೀತಿಯ ರೂಪುರೇಷೆಗಳೇನು; (ವಿವರ ನೀಡುವುದು) | ಮರಳು ನೀತಿಯ ರೂಪುರೇಷೆಗಳನ್ನು ಅಂತಿಮಗೊಳಿಸಲಾಗುತ್ತಿದ್ದು, ಹೊಸ ಮರಳು ನೀತಿಯಲ್ಲಿ ಸೇರ್ಪಡೆಗೊಳಿಸಲಾಗುವುದು. |
| ಈ. | ಸದರಿ ಮರಳು ನೀತಿಯಿಂದ ಸರ್ಕಾರದ ಯೋಜನೆಯ ಫಲಾನುಭವ ಪಡೆದು, ನಿವೇಶನಗಳಲ್ಲಿ ಮನೆ ನಿರ್ಮಾಣ ಮಾಡುವವರಿಗೆ ಯಾವುದಾದರೂ ರಿಯಾಯಿತಿ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ; | ಹೊಸ ಮರಳು ನೀತಿ ಜಾರಿ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. ಸದರಿ ಮರಳು ನೀತಿಯ ಜಾರಿ ಸಂಬಂಧ ಸರ್ಕಾರದ ಹಂತದಲ್ಲಿ ನಡೆದ ಸಭೆಯಲ್ಲಿ ಸರ್ಕಾರದ ಯೋಜನೆಯ ಫಲಾನುಭವ ಪಡೆದು ನಿವೇಶನಗಳು ಮನೆ ಮಾಡುವವರಿಗೆ ರಿಯಾಯಿತಿ ಸೌಲಭ್ಯ ಕಲ್ಪಿಸುವ ಬಗ್ಗೆ ಚರ್ಚಿಸಲಾಗಿರುತ್ತದೆ. |
| ಉ) | ಖಾಸಗಿಯವರನ್ನು ಹೊರತುಪಡಿಸಿ, ಸರ್ಕಾರದ ಇಲಾಖಾ ವತಿಯಿಂದ ಕಡಿಮೆ ಮೊತ್ತದಲ್ಲಿ ಮರಳು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಸರ್ಕಾರದ ಇಲಾಖೆ ವತಿಯಿಂದ ಗ್ರಾಹಕರಿಗೆ ಕೈಗೆಟುಕುವ ದರದಲ್ಲಿ ಮರಳು ಒದಗಿಸಲು ರೂಪುರೇಷೆಗಳನ್ನು ಅಂತಿಮಗೊಳಿಸಲಾಗುತ್ತಿದೆ. |

ಸಂಖ್ಯೆ: ಸಿಐ 112 ಎಂಎಂಎನ್ 2020

(ಸಿ.ಸಿ. ಪಾಟೀಲ)

ಗಣಿ ಮತ್ತು ಭೂವಿಜ್ಞಾನ ಸಚಿವರು